**All India Radio: Bangalore**
**Regional Bulletin In Kannada**
**23.01.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.01.2026 / 2.30 p.m.**

**<><><><>**

ಮುಖ್ಯಾಂಶಗಳು

1. ರಾಜ್ಯಪಾಲರಿಗೆ ಅವಮಾನ ಮಾಡಿದವರ ವಿರುದ್ಧ ಕ್ರಮಕ್ಕೆ ಪ್ರತಿಪಕ್ಷಗಳ ಆಗ್ರಹ
2. ಸದನದಲ್ಲಿ ರಾಷ್ಟ್ರಗೀತೆಗೆ ಅಪಮಾನ ಮಾಡಿದ ಆರೋಪ ; ಕ್ಷಮೆಯಾಚಿಸಲು ರಾಜ್ಯಪಾಲರಿಗೆ ಸಚಿವ ಎಚ್.ಕೆ.ಪಾಟೀಲ್ ಒತ್ತಾಯ
3. ದೇಶದಲ್ಲೇ ರೇರ್ ಅರ್ಥ್ ಆಯಸ್ಕಾಂತ ಉತ್ಪಾದನೆ - ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
4. ಎಂಟನೇ ದಿನಕ್ಕೆ ಕಾಲಿಟ್ಟ ಲಕ್ಕುಂಡಿ ಉತ್ಖನನ ; ಮುಂದುವರಿದ ಶೋಧ ಕಾರ್ಯ

<><><><>

ವಿಧಾನಸಭೆ ಕಲಾಪ ಇಂದು ಆರಂಭವಾಗುತ್ತಿದ್ದಂತೆ ರಾಜ್ಯಪಾಲರಿಗೆ ನಿನ್ನೆ ಅವಮಾನ ಮಾಡಿದವರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಪ್ರತಿಪಕ್ಷದ ಸದಸ್ಯರು ಒತ್ತಾಯಿಸಿದರು. ಈ ಸಮಯದಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಗೊಂದಲದ ವಾತಾವರಣ ನಿರ್ಮಾಣವಾಯಿತು. ಪ್ರತಿಪಕ್ಷ ನಾಯಕ ಆರ್.ಅಶೋಕ ಮಾತನಾಡಿ, ಈ ಘಟನೆ ಸದನಕ್ಕೆ ಕಪ್ಪು ಚುಕ್ಕೆ. ಘಟನೆ ನಡೆದು ೨೪ ಗಂಟೆಯಾಯಿತು. ತಪ್ಪು ಮಾಡಿದವರಿಗೆ ಶಿಕ್ಷೆಯಾಗಬೇಕು. ನಡೆದಿರುವ ಘಟನೆ ಬಗ್ಗೆ ಸದನ ವಿಷಾದ ವ್ಯಕ್ತಪಡಿಸಬೇಕು. ತಪ್ಪು ಮಾಡಿದವರಿಗೆ ಶಿಕ್ಷೆ ನೀಡದಿದ್ದರೆ ಕೆಟ್ಟ ಸಂದೇಶ ರವಾನೆ ಮಾಡಿದಂತೆ ಆಗುತ್ತದೆ ಎಂದು ಆಗ್ರಹಿಸಿದರು. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಮಾತನಾಡಿ, ಈ ಹಿಂದೆ ಬಿಜೆಪಿ ಸದಸ್ಯರು ಕಾಗದಗಳನ್ನು ಸಭಾಧ್ಯಕ್ಷರ ಮುಖದ ಮೇಲೆ ಎಸೆದರು. ಮೈಕ್ ಎಳೆದರು. ಆ ಘಟನೆಗೆ ತೇಪೆ ಹಚ್ಚಲು ನಿನ್ನೆಯ ಘಟನೆಯ ರಕ್ಷಣೆ ಪಡೆಯುತ್ತಿದ್ದಾರೆ ಎಂದು ದೂರಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿಯ ಸುರೇಶ್ ಗೌಡ,

ಈ ಹಿಂದೆ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿ ಇದ್ದಾಗ ೯೦ ಬಾರಿ ರಾಜ್ಯ ಸರ್ಕಾರಗಳನ್ನು ವಜಾ ಮಾಡಿದ ದಾಖಲೆಗಳಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

<><><><>

ಸದನದಲ್ಲಿ ರಾಷ್ಟ್ರಗೀತೆಗೆ ಅವಮಾನ ಮಾಡಿದ್ದಾರೆ ಎನ್ನಲಾದ ಘಟನೆಗೆ ಸಂಬಂಧಿಸಿದಂತೆ ರಾಜ್ಯಪಾಲರು ಕನ್ನಡ ನಾಡಿನ ಜನತೆಯ ಕ್ಷಮೆ ಕೇಳಬೇಕು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಒತ್ತಾಯಿಸಿದ್ದಾರೆ. ಬಿಜೆಪಿ ಸದಸ್ಯರ ಎತ್ತಿದ ಆಕ್ಷೇಪಕ್ಕೆ ಉತ್ತರಿಸಿದ ಸಚಿವ ಎಚ್.ಕೆ.ಪಾಟೀಲ್, ರಾಜ್ಯಪಾಲರು ಚುಟುಕು ಭಾಷಣ ಮುಗಿಸುತ್ತಿದ್ದಂತೆ ಜೈ ಹಿಂದ್ ಎಂದು ಹೇಳಿ ರಾಷ್ಟ್ರಗೀತೆಗೂ ಕಾಯದೆ ಹೊರಟೇಬಿಟ್ಟರು. ಅವರು ಮಾಡಿದ ತಪ್ಪನ್ನು ಕ್ಷಮಿಸಲು ಸಾಧ್ಯವಿಲ್ಲ. ರಾಷ್ಟ್ರಗೀತೆಗೆ ಅವಮಾನ ಮಾಡಿದವರು ಜನಸಾಮಾನ್ಯರರಾಗಲಿ, ರಾಜ್ಯಪಾಲರಾಗಲಿ ಅದು ತಪ್ಪು. ರಾಜ್ಯಪಾಲರು ಕನ್ನಡ ನಾಡಿನ ಜನರ ಕ್ಷಮೆ ಕೋರಬೇಕು ಎಂದು ಆಗ್ರಹಿಸಿದರು. ಬಿಜೆಪಿಯ ಆರ್.ಅಶೋಕ ಮಾತನಾಡಿ, ರಾಜ್ಯಪಾಲರು ಈ ಸದನದಲ್ಲಿ ಇಲ್ಲ. ಅವರ ಮೇಲೆ ಸದನದಲ್ಲಿ ಮಾಡಿದ ಆರೋಪಕ್ಕೆ ಅವರು ಸಮರ್ಥನೆ ಮಾಡಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದರು. ರಾಜ್ಯಪಾಲರು ವಿಧಾನಸಭೆಯ ಜಂಟಿ ಅಧಿವೇಶನದಲ್ಲಿ ಚುಟುಕು ಭಾಷಣ ಮಾಡಿದ ಹಲವಾರು ಉದಾಹರಣೆಗಳಿವೆ. ರಾಜ್ಯಪಾಲರು ಜಂಟಿ ಸದನದಲ್ಲಿ ಪೂರ್ಣ ಭಾಷಣ ಮಾಡಬೇಕು ಎಂದು ಒತ್ತಡ ಹೇರುವುದು ಸರಿಯಲ್ಲ ಎಂದರು. ಈ ವೇಳೆ ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಗೊಂದಲದ ವಾತಾವರಣ ನಿರ್ಮಾಣವಾಯಿತು.

<><><><>

ನೂರ ಐವತ್ತೆಂಟನೆಯ ಅಧಿವೇಶನದ ಎರಡನೇ ದಿನವಾದ ಇಂದು ವಿಧಾನ ಪರಿಷತ್‌ನಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕಲಾಪ ಕೈಗೆತ್ತಿಕೊಂಡರು. ಕಲಾಪ ಆರಂಭವಾಗುತ್ತಿದ್ದಂತೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ವಿಷಯ ಪ್ರಸ್ತಾಪಿಸಿ, ಉಭಯ ಸದನಗಳನ್ನು ಉದ್ದೇಶಿಸಿ ಚುಟುಕು ಭಾಷಣ ಮಾಡಿ ಹೊರ ಹೋಗುತ್ತಿದ್ದ ರಾಜ್ಯಪಾಲರಿಗೆ ಅನುಚಿತವಾಗಿ ವರ್ತಿಸಿ ತಡೆಯಲು ಪ್ರಯತ್ನಿಸಿದ್ದಾರೆ. ಈ ಮೂಲಕ ರಾಜ್ಯಪಾರಿಗೆ ಅಗೌರವ ತೋರಿದ್ದಾರೆ. ಈ ರೀತಿ ಮಾಡಿದ ಸದಸ್ಯರನ್ನು ಅಮಾನತು ಮಾಡಬೇಕು ಎಂದು ಒತ್ತಾಯಿಸಿದರು. ಈ ವೇಳೆ ಕ್ರಿಯಾಲೋಪ ಎತ್ತಿದ ಕಾಂಗ್ರೆಸ್ ಸದಸ್ಯ ಬಿ.ಕೆ.ಹರಿಪ್ರಸಾದ್

ಮಾತನಾಡಲು ಆರಂಭಿಸುತ್ತಿದ್ದಂತೆ ವಿಪಕ್ಷ ಸದಸ್ಯರು ಆಕ್ಷೇಪಿಸಿದರು. ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ರಾಜ್ಯಪಾಲರು ರಾಷ್ಟ್ರ ಗೀತೆಗೆ ಅವಮಾನ ಮಾಡಿದ್ದಾರೆ ಎಂದು ಆರೋಪಿಸಿದರು. ಗದ್ದಲದ ನಡುವೆ ಮಾತನಾಡಿದ ಛಲವಾದಿ ನಾರಾಯಣಸ್ವಾಮಿ, ಈ ಹಿಂದೆ ರಾಜ್ಯಪಾಲರಾಗಿದ್ದ ಹಂಸರಾಜ್ ಭಾರದ್ವಾಜ ಕೂಡ ಭಾಷಣ ಮಾಡಿರಲಿಲ್ಲ. ಕಾನೂನು ಪ್ರಕಾರ ಹೋರಾಟ ಮಾಡಲಿ. ಅದು ಬಿಟ್ಟು ಅನುಚಿತ ವರ್ತನೆ ಸರಿಯೇ ಎಂದು ಪ್ರಶ್ನಿಸಿದ ಅವರು, ಅಂತಹವರನ್ನು ಸದನದಿಂದ ಅಮಾನತು ಮಾಡಬೇಕು ಎಂದು ಒತ್ತಾಯಿಸಿದರು.

<><><><>

ಪ್ರಸ್ತುತ ಭಾರತಕ್ಕೆ ರೇರ್ ಅರ್ಥ್ ಆಯಸ್ಕಾಂತದ ರಫ್ತನ್ನು ಚೀನಾ ಸ್ಥಗಿತಗೊಳಿಸಿದೆ. ಹೀಗಾಗಿ ದೇಶದಲ್ಲೇ ರೇರ್ ಅರ್ಥ್ ಆಯಸ್ಕಾಂತ ಉತ್ಪಾದನೆಗೆ ಕೇಂದ್ರ ಸರ್ಕಾರ ಮುಂದಾಗಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಮಂಡ್ಯದ ಶಿವಳ್ಳಿಯಲ್ಲಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ಮಾತನಾಡಿದ ಅವರು, ಭಾರತದಲ್ಲಿ ಕೆಲ ಯೋಜನೆಗಳಿಗೆ ಚೀನಾ ಪ್ರತಿರೋಧ ಒಡ್ಡಿದೆ. ದೇಶದ ಪ್ರಗತಿಗೆ ಹಾಗೂ ಹಲವು ಇಲಾಖೆಗಳಿಗೆ ರೇರ್ ಅರ್ಥ್ ಆಯಸ್ಕಾಂತದ ಅವಶ್ಯಕತೆ ಇದೆ. ಈ ಹಿಂದೆ ಚೀನಾದಿಂದ ಶೇಕಡ ೯೦ರಷ್ಟು ರೇರ್ ಅರ್ಥ್ ಆಯಸ್ಕಾಂತ ಭಾರತಕ್ಕೆ ಆಮದಾಗುತ್ತಿತ್ತು. ಈಗ ಅದನ್ನು ನಿಲ್ಲಿಸಿದ್ದು, ಇನ್ನು ಮುಂದೆ ದೇಶದಲ್ಲೇ ರೇರ್ ಅರ್ಥ್ ಆಯಸ್ಕಾಂತ ಉತ್ಪಾದನೆಗೆ ತೆರಿಗೆ ವಿನಾಯಿತಿ ನೀಡಿ, ಐದು ಕಂಪನಿಯನ್ನು ಆಯ್ಕೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಈ ಐದು ಕಂಪನಿಯ ಪೈಕಿ ಒಂದನ್ನು ಮಂಡ್ಯಕ್ಕೆ ತರಲು ಚಿಂತನೆ ನಡೆಸಲಾಗಿದೆ ಎಂದು ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದರು.

<><><><>

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ಇಂದು ಎಂಟನೇ ದಿನಕ್ಕೆ ಕಾಲಿಟ್ಟಿದೆ. ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ನಡೆಯುತ್ತಿದೆ. ಇಲ್ಲಿಯವರೆಗೆ ಎಂಟು ಅಡಿಗಳ ಆಳದಲ್ಲಿ ಉತ್ಖನನ ನಡೆಯುತ್ತಿದೆ. ಇಂದಿನ ಉತ್ಖನನ ಕಾರ್ಯದಲ್ಲಿ ದೊಡ್ಡ ಗಾತ್ರದ ಬಂಡೆ ಕಲ್ಲುಗಳು ಪತ್ತೆಯಾಗಿರುವುದು ವಿಶೇಷವಾಗಿದೆ ಎಂದು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ತಿಳಿಸಿದ್ದಾರೆ. ಲಕ್ಕುಂಡಿ ಗ್ರಾಮದಲ್ಲಿ ಮನೆಗೆ ಅಡಿಪಾಯ ಹಾಕಲು ಅಗೆಯುತ್ತಿರುವಾಗ

ದೊರೆತ ೪೬೬ ಗ್ರಾಮ್ ಚಿನ್ನವನ್ನು ಸರ್ಕಾರಕ್ಕೆ ಒಪ್ಪಿಸಿದ್ದ ಪ್ರಜ್ವಲ್ ರಿತ್ತಿ ಅವರ ಕುಟುಂಬಕ್ಕೆ ಲಕ್ಕುಂಡಿ ಗ್ರಾಮ ಪಂಚಾಯತ್ ಉಚಿತ ನಿವೇಶನ ನೀಡುವುದಾಗಿ ತಿಳಿಸಿದೆ.

<><><><>

ಮಂಡ್ಯ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ತೋಟಗಾರಿಕೆ ಆವರಣದಲ್ಲಿ ಆಯೋಜಿಸಲಾಗಿರುವ ಫಲಪುಷ್ಪ ಪ್ರದರ್ಶನವನ್ನು ಕೃಷಿ ಸಚಿವ ಚಲುವರಾಯಸ್ವಾಮಿ ಇಂದು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಸಚಿವರು, ಕಳೆದ ಬಾರಿಗಿಂತ ಈ ಬಾರಿ ವಿಶೇಷವಾಗಿ ೨ ಲಕ್ಷಕ್ಕೂ ಅಧಿಕ ಹೂಗಳನ್ನು ಬಳಿಸಿ, ವಿವಿಧ ಇಲಾಖೆಗಳ ಸೌಲಭ್ಯಗಳ ಕುರಿತು ವಿಶೇಷ ಫಲಪುಷ್ಪ ಪ್ರದರ್ಶನ ಆಯೋಜಿಸಲಾಗಿದೆ. ಸಾರ್ವಜನಿಕರು ಇದರ ಉಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಕೃಷಿ ಇಲಾಖೆ ವತಿಯಿಂದ ರೈತ ಮಹಿಳೆಯರು ಉದ್ಯಮಿಯಾಗಿ ಪರಿವರ್ತನೆಯಾಗಲು ಹಾಗೂ ಇಲಾಖೆಯ ವತಿಯಿಂದ ನೀಡಲಾಗುವ ವಿವಿಧ ಸೌಲಭ್ಯಗಳ ಕುರಿತು ವಿಶಿಷ್ಟ ಕಲಾಕೃತಿ, ಜೊತೆಗೆ ಯಾಂತ್ರೀಕೃತ ಭತ್ತ ನಾಟಿ ಮಾಡುವ ಯಂತ್ರ ಮತ್ತು ರೈತ ಮಹಿಳೆಯನ್ನು ಹೂವಿನ ಕಲಾಕೃತಿಯಲ್ಲಿ ಪ್ರದರ್ಶಿಸಲಾಗಿದೆ ಎಂದರು. ತಾಯಿಯ ಎದೆ ಹಾಲಿನ ಮಹತ್ವ ಕುರಿತು ಸಂದೇಶ ಸಾರಲು ವಿಶೇಷವಾಗಿ ತಾಯಿ, ಮಗುವಿಗೆ ಎದೆಹಾಲು ಉಣಿಸುತ್ತಿರುವ ಕಲಾಕೃತಿಯನ್ನು ಪ್ರದರ್ಶಿಸಲಾಗಿದೆ ಎಂದು ಸಚಿವ ಚಲುವರಾಯಸ್ವಾಮಿ ವಿವರಿಸಿದರು.

<><><><>

ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಉಳಿಯಬೇಕಾದರೆ, ಆಧುನಿಕ ತಂತ್ರಜ್ಞಾನ ಮತ್ತು ಡಿಜಿಟಲೀಕರಣವನ್ನು ಅಳವಡಿಸಿಕೊಳ್ಳುವುದು ಅನಿವಾರ್ಯ ಎಂದು ಬೆಂಗಳೂರಿನ ಕರ್ನಾಟಕ ತಾಂತ್ರಿಕ ಸಲಹಾ ಸೇವಾ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಸಿದ್ದರಾಜು ಅಭಿಪ್ರಾಯಪಟ್ಟಿದ್ದಾರೆ. ದಾವಣಗೆರೆಯಲ್ಲಿಂದು ಜಿಲ್ಲಾ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯಿಂದ ರ‍್ಯಾಂಪ್ ಯೋಜನೆಯಡಿ ಹಮ್ಮಿಕೊಂಡಿದ್ದ 'ಎಂಎಸ್ಎಂಇ ಗಳ ಕಾರ್ಯಕ್ಷಮತೆ ಹೆಚ್ಚಳ ಮತ್ತು ವೇಗವರ್ಧನೆ' ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬೃಹತ್ ಕೈಗಾರಿಕೆಗಳು ಇಂದು ಫೇಸ್‌ಬುಕ್, ಇನ್‌ಸ್ಟಾಗ್ರಾಮ್ ನಂತಹ ಸಾಮಾಜಿಕ ಜಾಲತಾಣಗಳ ಮೂಲಕ ತಮ್ಮ ಉತ್ಪನ್ನಗಳನ್ನು ಜಾಗತಿಕವಾಗಿ ತಲುಪಿಸುತ್ತಿವೆ. ಅದೇ ರೀತಿ ಸಣ್ಣ ಕೈಗಾರಿಕೆಗಳು ಸಹ ಡಿಜಿಟಲೀಕರಣಕ್ಕೆ ಒಗ್ಗಿಕೊಳ್ಳಬೇಕು. ಉತ್ಪನ್ನಗಳ

ಪ್ರದರ್ಶನ ಮತ್ತು ಮಾರಾಟ ಪ್ರಕ್ರಿಯೆಯಲ್ಲಿ ಡಿಜಿಟಲ್ ಮಾಧ್ಯಮಗಳನ್ನು ಬಳಸಿಕೊಂಡರೆ, ರಾಜ್ಯದ ಹಾಗೂ ಹೊರ ರಾಜ್ಯಗಳ ಗ್ರಾಹಕರು ಉತ್ಪನ್ನಗಳತ್ತ ಆಕರ್ಷಿತರಾಗುತ್ತಾರೆ. ಇದರಿಂದ ಬೇಡಿಕೆ ಹೆಚ್ಚಾಗುತ್ತದೆ ಎಂದು ಎಸ್.ಸಿದ್ದರಾಜು ಸಲಹೆ ನೀಡಿದರು.

<><><><>

ದಕ್ಷಿಣಕನ್ನಡ ಜಿಲ್ಲೆಯ ಪ್ರತಿ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸುವ ನಿಟ್ಟಿನಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ವಿಶೇಷ ಮುತುವರ್ಜಿ ವಹಿಸಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನರ್ವಾಡೆ ವಿನಾಯಕ ಕಾರ್ಬಾರಿ ಸೂಚನೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ನಡೆದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳಿಗೆ ಪೂರೈಕೆಯಾಗುವ ಕುಡಿಯುವ ನೀರಿನ ಮೂಲಗಳ ಗುಣಮಟ್ಟ ಪರೀಕ್ಷೆಯನ್ನು ಸತತವಾಗಿ ನಡೆಸಬೇಕು. ಅಶುದ್ಧ ನೀರಿನ ಪೂರೈಕೆ ಬಗ್ಗೆ ದೂರುಗಳು ಬಂದಲ್ಲಿ ಪಿಡಿಒಗಳನ್ನು ಹೊಣೆಗಾರರನ್ನಾಗಿ ಮಾಡಿ ಕ್ರಮ ವಹಿಸಲಾಗುವುದು ಎಂದು ಎಚ್ಚರಿಸಿದರು. ಜಲಜೀವನ್ ಮಿಷನ್ ಕಾಮಗಾರಿ ಪ್ರಗತಿ ಪರಿಶೀಲಿಸಿ, ಶೀಘ್ರದಲ್ಲಿ ಕೆಲಸ ಪೂರ್ಣಗೊಳಿಸಬೇಕು. ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಗಳನ್ನು ಪ್ರತಿ ತಿಂಗಳು ನಡೆಸಬೇಕು. ಜಿಲ್ಲೆಯ ಎಲ್ಲ ಗ್ರಾಮಗಳಲ್ಲಿನ ನೀರಿನ ಟ್ಯಾಂಕ್‌ಗಳನ್ನು ಶುಚಿಗೊಳಿಸಬೇಕು. ಪ್ರತಿಯೊಂದು ಕುಡಿಯುವ ನೀರಿನ ಮೂಲಗಳಿಂದ ಕಡ್ಡಾಯವಾಗಿ ನೀರಿನ ಮಾದರಿಗಳನ್ನು ಪರೀಕ್ಷೆ ಮಾಡಿಸಬೇಕು ಎಂದು ಅವರು ನಿರ್ದೇಶಿಸಿದರು.

<><><><>

ಉಡುಪಿ ಜಿಲ್ಲೆಯ ಪಡುವರಿ ಸೋಮೇಶ್ವರ ಬೀಚ್, ತ್ರಾಸಿ-ಮರವಂತೆ ಬೀಚ್, ಆಸರೆ ಬೀಚ್, ಮಲ್ಪೆ ಬೀಚ್, ಸೈಂಟ್ ಮೇರೀಸ್ ದ್ವೀಪ, ಕಾಪು ಬೀಚ್ ಹಾಗೂ ಪಡುಬಿದ್ರಿ ಮುಖ್ಯ ಬೀಚ್‌ಗಳಲ್ಲಿ ಜೀವ ರಕ್ಷಕ ಸಿಬ್ಬಂದಿಗಳ ನಿಯೋಜನೆಗಾಗಿ ಪ್ರವಾಸೋದ್ಯಮ ಇಲಾಖೆ ವತಿಯಿಂದ ೨೦ ಜನರಿಗೆ ಜೀವ ರಕ್ಷಕ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>